**ಸಾಕ್ಷಿಗೆ ದಿನಾಂಕ:02-03-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಮುಂದುವರೆದ ಪಾಟೀ ಸವಾಲು :: ಪ್ರತಿವಾದಿ ಪರ ಶ್ರೀ. KRG ವಕೀಲರಿಂದ ::**

ನನ್ನ ತಾಯಿ ಬಸಮ್ಮ ರವರು ತೀರಿಕೊಂಡು 18-20 ವರ್ಷ ಆಗಿರಬಹುದು. ನನ್ನ ತಾಯಿ ತೀರಿಕೊಂಡ ನಂತರ ನಮ್ಮ ಕುಟುಂಬದಲ್ಲಿ ಇದ್ದ ಆಸ್ತಿಗಳಿಗೆ ಸಂಬಂಧಪಟ್ಟಂತೆ ನಾವು 4 ಮಕ್ಕಳು ಪೌತಿ ಆಧಾರದಲ್ಲಿ ಜಂಟಿ ಖಾತೆ ಮಾಡಿಸಿಕೊಂಡಿರುತ್ತೇವೆ ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತು ಅಸ್ತಿತ್ವದಲ್ಲಿ ಇರುವ ವಿಚಾರ ಸದರಿ ಖಾತೆ ಮಾಡಿಸಿಕೊಳ್ಳುವ ಸವಯದಲ್ಲಿ ನನಗೆ ತಿಳಿದಿತ್ತು ಎಂದರೆ ಸರಿ. ಸದರಿ ಸಮಯದಲ್ಲಿ ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ನಾವು ಖಾತೆ ಬದಲಾವಣೆ ಕೋರಿ ಯಾವುದೇ ಅರ್ಜಿ ಸಲ್ಲಿಸಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಖಾತೆ ಬದಲಾವಣೆ ಮಾಡಿಕೊಡಲು ಅರ್ಜಿಯನ್ನು 3-4 ವರ್ಷದ ಹಿಂದೆ ನೀಡಿರಬಹುದು, ನಿಖರವಾದ ದಿನಾಂಕ ನೆನಪಿಲ್ಲ. 1977 ರಲ್ಲಿ ನನ್ನ ತಾಯಿ ದಾವಾ ಶೆಡ್ಯೂಲ್ ಸ್ವತ್ತನ್ನು ಖರೀದಿ ಮಾಡಿರುವ ವಿಚಾರ ನಮಗೆ ಹಿಂದಿನಿಂದ ತಿಳಿದಿತ್ತು ಎಂದರೆ ಸರಿ. ನಮ್ಮ ತಾಯಿ ಅವರ ಜೀವಿತಾ ಅವಧಿಯಲ್ಲಿ ವ್ಯವಸಾಯ ಮಾಡಿರುವುದಿಲ್ಲ ಎಂದರೆ ಸರಿ. ನನ್ನ ತಾಯಿ ದಾವಾ ಶೆಡ್ಯೂಲ್ ಸ್ವತ್ತನ್ನು ಅವರ ಜೀವಿತಾ ಅವಧಿಯಲ್ಲಿ ನೋಡಿರುವುದಿಲ್ಲ ಎಂದರೆ ಸರಿ. ನನ್ನ ತಾಯಿಗೆ ದಾವಾ ಶೆಡ್ಯೂಲ್ ಸ್ವತ್ತಿನ ಚೆಕ್ಕುಬಂದಿ ತಿಳಿದಿರಲಿಲ್ಲ ಎಂದರೆ ಸಾಕ್ಷಿಯು ಅದರ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ ಎಂದು ನುಡಿಯುತ್ತಾರೆ. ದಾವಾ ಶೆಡ್ಯೂಲ್ ಸ್ವತ್ತಿನ ಪೂರ್ವಕ್ಕೆ ಕುಪ್ಪರಿಗಣ್ಣನಕಟ್ಟೆ, ಪಶ್ಚಿಮಕ್ಕೆ ರವಿ ಬಿನ್ ಸಿದ್ದಪ್ಪ ರವರ ಜಮೀನು, ಉತ್ತರಕ್ಕೆ ಹಾಲಯ್ಯನ ಹನುಮಂತಪ್ಪ ರವರ ಜಮೀನು ಮತ್ತು ದಕ್ಷಿಣಕ್ಕೆ ಶಿವಯ್ಯನ ನಂಜುಂಡಪ್ಪ ರವರ ಜಮೀನು ಇರುತ್ತದೆ ಎಂದರೆ ಸರಿ.

1977 ನೇ ಸಾಲಿಗೂ ಮೊದಲು ದಾವಾ ಶೆಡ್ಯೂಲ್ ಸ್ವತ್ತು ಯಾರ ಹೆಸರಿನಲ್ಲಿ ಇತ್ತು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಎಸಿ ನ್ಯಾಯಾಲಯದಲ್ಲಿ ವ್ಯಾಜ್ಯವನ್ನು ಸಿವಿಲ್ ನ್ಯಾಯಾಲಯದಲ್ಲಿ ಬಗೆಹರಿಸಿಕೊಳ್ಳುವಂತೆ ಆದೇಶ ಆಗಿರುತ್ತದೆ. ನಾನು ದಾವಾ ಶೆಡ್ಯೂಲ್ ಸ್ವತ್ತನ್ನು ಖುದ್ದಾಗಿ ನೋಡಿರುವುದಿಲ್ಲ ಎಂದರೆ ಸರಿ.

ದಾವಾ ಶೆಡ್ಯೂಲ್ ಸ್ವತ್ತನ್ನು ನಾವು ಹೇಳುತ್ತಿರುವಂತೆ ನನ್ನ ತಾಯಿ ಯಾವತ್ತು ಸಹ ಕ್ರಯಕ್ಕೆ ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ನಾವು ಹೇಳುತ್ತಿರುವಂತೆ ದಾವಾ ಶೆಡ್ಯೂಲ್ ಸ್ವತ್ತಿನ ಮಾಲೀಕರಾದ ಮಹಾದೇವಪ್ಪ ರವರು ಯಾವತ್ತು ಸಹ ನನ್ನ ತಾಯಿಗೆ ಮಾರಾಟ

ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾವು ಹಾಜರುಪಡಿಸಿರುವ ಕ್ರಯಪತ್ರರದಲ್ಲಿ ಇರುವ ಸಹಿ ಸಹ ಮಹಾದೇವಪ್ಪ ರವರದ್ದಾಗಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆ ಹಿಂದೆ ಅಡಿಕೆ ಚೇಣಿ ವ್ಯಾಪಾರ ಮಾಡಿಕೊಂಡಿದ್ದರು ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತನ್ನು ನಾವು ಹೇಳುವಂತೆ ನನ್ನ ತಾಯಿ ಖರೀದಿ ಮಾಡಿದ್ದಲ್ಲಿ ನಾವು ಹಿಂದೆಯೇ ಖಾತೆ ಮಾಡಿಸಿಕೊಳ್ಳಬೇಕಿತ್ತು ಮತ್ತು ನಾವು ನಕಲಿ ದಾಖಲೆ ಸೃಷ್ಟಿಸಿರುವ ಕಾರಣ ಇಲ್ಲಿಯವರೆಗೂ ಖಾತೆ ಮಾಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತಾಯಿ ದಾವಾ ಶೆಡ್ಯೂಲ್ ಸ್ವತ್ತಿನ ಮಾಲೀಕರು ಆಗಿರಲಿಲ್ಲ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಮೊದಲಿನಿಂದ ಪ್ರತಿವಾದಿಯೇ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತಿಗೆ ಸಂಬಂಧಪಟ್ಟಂತೆ ನಾವುಗಳು ಕ್ರಯಪತ್ರ ಹೊರತುಪಡಿಸಿ ಬೇರೆ ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ದಾವಾ ಶೆಡ್ಯೂಲ್ ಸ್ವತ್ತಿಗೆ ಪ್ರತಿವಾದಿಯೇ ಮಾಲೀಕರಾಗಿರುತ್ತಾರೆ ಎಂದರೆ ಸರಿಯಲ್ಲ. ನಾವು ದಾವೆಯನ್ನು ಕಾಲಪರಿಮಿತಿಯ ಒಳಗೆ ಸಲ್ಲಿಸದ ಕಾರಣ ಈ ದಾವೆಯಲ್ಲಿ ಯಾವುದೇ ಪರಿಹಾರ ಪಡೆಯಲು ಅರ್ಹನಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾವು ಹೇಳುತ್ತಿರುವಂತೆ 02.07.2015 ರಂದು ಪ್ರತಿವಾದಿ ನಮಗೆ ಯಾವುದೇ ತೊಂದರೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಹೂಡುವ ಪೂರ್ವದಲ್ಲಿ ಪ್ರತಿವಾದಿ ದಾವಾ ಶೆಡ್ಯೂಲ್ ಸ್ವತ್ತನ್ನು ಯಾರಿಗೆ ಮಾರಾಟ ಮಾಡಲು ಪ್ರಯತ್ನ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪ್ರತಿವಾದಿಯು ದಾವಾ ಶೆಡ್ಯೂಲ್ ಸ್ವತ್ತಿನ ಮಾಲೀಕತ್ವವನ್ನು ನಿರಾಕರಿಸಿದ ಬಗ್ಗೆ ನಮ್ಮ ವಾದ ಪತ್ರದಲ್ಲಿ ಯಾವುದೇ ಒಕ್ಕಣೆ ಇರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ. ಆದಕಾರಣ ಈ ದಾವೆಯಲ್ಲಿ ಯಾವುದೇ ಪರಿಹಾರ ಪಡೆಯಲು ಅರ್ಹನಾಗಿರುವುದಿಲ್ಲ ಎಂದರೆ ಸರಿಯಲ್ಲ. ದಾವೆ ಹೂಡಿದ ನಂತರ ಪ್ರತಿವಾದಿ ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಉಳುಮೆ ಮಾಡುವ ಸಮಯದಲ್ಲಿ ಅವರ ವಿರುದ್ದ ಪೊಲೀಸ್ ದೂರನ್ನು ನೀಡಿದ್ದೆನು ಎಂದರೆ ಸರಿ. ಸದರಿ ಸಮಯದಲ್ಲಿ ನಾನು ಪೊಲೀಸರ ಸಮಕ್ಷಮ ಪ್ರತಿವಾದಿಯು ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನವನ್ನು ನಮಗೆ ಕೊಡುತ್ತಿಲ್ಲ ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸಾಕ್ಷಿಯು ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ನಾವೆ ಇರುತ್ತೇವೆ ಎಂದು ನುಡಿಯುತ್ತಾರೆ. ನಾನು ಅಥವಾ ನನ್ನ ತಾಯಿಯಾಗಲೀ ಇವರಗೊ ದಾವಾ ಶೆಡ್ಯೂಲ್ ಸ್ವತ್ತಿಗೆ ಯಾವುದೇ ಕಂದಾಯ ಪಾವತಿ ಮಾಡಿರುವುದಿಲ್ಲ ಎಂದರೆ ಸರಿ.

ಮಹಾದೇವಪ್ಪ ರವರು 2006 ರಲ್ಲಿ ಮೃತರಾಗಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನನ್ನ ತಾಯಿ ತೀರಿಕೊಂಡ 2 ವರ್ಷದ ನಂತರ ಮಹಾದೇವಪ್ಪ ರವರು ತೀರಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಮಹಾದೇವಪ್ಪ ರವರ ಜೀವಿತಾ ಅವಧಿಯಲ್ಲಿ ನಾವಾಗಲೀ ನನ್ನ ತಾಯಿಯಾಗಲೀ ದಾವಾ ಶೆಡ್ಯೂಲ್ ಸ್ವತ್ತಿನ ಖಾತೆಯನ್ನು ಬದಲಾವಣೆ ಮಾಡಿಕೊಡಲು ಕೇಳಿರುವುದಿಲ್ಲ ಎಂದರೆ ಕೇಳಿರುತ್ತೇವೆ ಎಂದು ನುಡಿಯುತ್ತಾರೆ. ಆ ರೀತಿ ಕೇಳದಿದ್ದರೂ ದುರುದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಮಹಾದೇವಪ್ಪ ತೀರಿಕೊಂಡ ನಂತರ ಪ್ರತಿವಾದಿ 2007-08 ರಲ್ಲಿ ಅವರ ಹೆಸರಿಗೆ ದಾವಾ ಶೆಡ್ಯೂಲ್ ಸ್ವತ್ತಿನ ಖಾತೆಯನ್ನು ಬದಲಾವಣೆ ಮಾಡಿಸಿಕೊಂಡಿರುತ್ತಾರೆ ಎಂದರೆ ಸರಿ. ಆ ರೀತಿ ಖಾತೆ ಬದಲಾವಣೆ ಮಾಡಿಸಿಕೊಂಡ ನಂತರದಲ್ಲಿ ನಾವು ನಮ್ಮ ವಕೀಲರ ಮುಖಾಂತರ ಪ್ರತಿವಾದಿಗೆ ಆ ಸಮಯದಲ್ಲಿಯೇ ತಿಳುವಳಿಕೆ ನೋಟೀಸ್ ಕೊಡಿಸಿರುತ್ತೇವೆ. ಆ ರೀತಿ ಯಾವುದೇ ತಿಳುವಳಿಕೆ ನೋಟೀಸ್ ನೀಡಿದಿದ್ದರೂ ದುರುದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. 2007-08 ರಿಂದ ದಾವಾ ಶೆಡ್ಯೂಲ್ ಸ್ವತ್ತಿನ ಖಾತೆಯು ಪ್ರತಿವಾದಿಯ ಹೆಸರಿನಲ್ಲಿ ಇದ್ದು ಅದಕ್ಕೆ ಸಂಬಂಧಪಟ್ಟಂತೆ ಅವರೇ ಕಂದಾಯ ಪಾವತಿ ಮಾಡಿಕೊಂಡು ಬೆಳೆ ಸಾಲ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಇವರೆಗೂ ಪ್ರತಿವಾದಿ ಸ್ವಾಧೀನದಲ್ಲಿ ಇರುವ ಕಾರಣ ನಾವು ಯಾವುದೇ ಪರಿಹಾರ ಪಡೆಯಲು ಅರ್ಹನಾಗಿರುವುದಿಲ್ಲ ಎಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಜೆ. ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: